# <u>ಕರ್ನಾಟಕ ಸರ್ಕಾರದ ನಡಾವಳಿಗಳು</u>

ವಿಷಯ: ನೀರಾವರಿ ಪಂಪ್‌ಸೆಟ್‌ಗಳಿಗೆ stand-alone /off grid ಸೋಲಾರ್ ಪಂಪ್‌ಸೆಟ್‌ಗಳನ್ನು ಒದಗಿಸುವ ಮೂಲಕ ನೀರಾವರಿ ಪಂಪ್‌ಸೆಟ್‌ಗಳನ್ನು ಬೆಂಬಲಿಸುವುದು ಮತ್ತು IP set ಫೀಡರ್‌ಗಳನ್ನು ಸೌರೀಕರಣಗೊಳಿಸುವ ಬಗ್ಗೆ.

ಓದಲಾಗಿದೆ:
1) ಆದೇಶ ಸಂಖ್ಯೆ ಇಎನ್ 9 ಪಿಎಸ್‌ಆರ್ 2011 ದಿನಾಂಕ 11.3.2011
2) ಸುತ್ತೋಲೆ ಸಂಖ್ಯೆ ಇನ್ 41 ವಿಎಸ್ ಸಿ 2014/P1 ದಿನಾಂಕ 14.7.2014 & 23.7.2014
3) ಸರ್ಕಾರದ ಪತ್ರ ಸಂಖ್ಯೆ ಇನ್ 41 ವಿಎಸ್ ಸಿ 2014 ದಿನಾಂಕ 26.9.2016 & 7.11.2016.

***

<u>ಪ್ರಸ್ತಾವನೆ:-</u>

ಅನಧಿಕೃತ ನೀರಾವರಿ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಚರ್ಚೆಯ ನಂತರ, ಈ ಹಿಂದೆ ಅನಧಿಕೃತ ನೀರಾವರಿ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸುವ ಪದ್ಧತಿಯನ್ನು ಕೂಡಲೇ ಬದಲಿಸಿ, ಹೊಸದಾಗಿ ಪದ್ಧತಿಯನ್ನು ಜಾರಿಗೆ ತರಲು ಸಚಿವ ಸಂಪುಟವು ತೀರ್ಮಾನಿಸಿತು. ಅದರಂತೆ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರಿ ಆದೇಶ ಸಂಖ್ಯೆ: ಎನರ್ಜಿ/ವಿಎಸ್ ಸಿ/214/ 2023,</u>**
**<u>ಬೆಂಗಳೂರು, ದಿನಾಂಕ: 7-10-2023</u>**

ರಾಜ್ಯದಲ್ಲಿ ನೀರಾವರಿ ಪಂಪ್‌ಸೆಟ್‌ಗಳನ್ನು ವಿದ್ಯುತ್ ಜಾಲಕ್ಕೆ ವ್ಯವಸ್ಥಿತವಾಗಿ ಸೇರ್ಪಡೆಗೊಳಿಸಲು ಮತ್ತು ಸೌರ ವಿದ್ಯುತ್ತನ್ನು ಸಮರ್ಪಕವಾಗಿ ಬಳಸಲು stand-alone /off grid ಸೋಲಾರ್ ಪಂಪ್‌ಸೆಟ್‌ಗಳನ್ನು ಹಾಗೂ IP set ಫೀಡರ್‌ಗಳ ಸೌರೀಕರಣವನ್ನು ಅನುಷ್ಠಾನಗೊಳಿಸಿ ರೈತರ ಪಂಪ್‌ಸೆಟ್‌ಗಳಿಗೆ ಹಗಲಿನ ವೇಳೆ ವಿದ್ಯುತ್ ಸೌಕರ್ಯ ಕಲ್ಪಿಸಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲು ಆದೇಶಿಸಿದೆ:

(1) ವಿದ್ಯುತ್ ಸರಬರಾಜು ಕಂಪನಿಗಳು 2015 ರಿಂದ ಈಚೆಗೆ IP ಸೆಟ್‌ಗಳನ್ನು ಸಕ್ರಮಗೊಳಿಸಿ, ಮೂಲಸೌಕರ್ಯ ರಚಿಸಲು ಕೈಗೊಂಡಿರುವ ಕ್ರಮಕ್ಕಾಗಿ ಘಟನೋತ್ತರ ಅನುಮೋದನೆ ನೀಡಿದೆ.

(2) ವಿದ್ಯುತ್ ಸರಬರಾಜು ಕಂಪನಿಗಳು 2015 ರಿಂದ ಈಚೆಗೆ ಬಂಡವಾಳ ವೆಚ್ಚದಲ್ಲಿ ಸಕ್ರಮಗೊಂಡ/ಸಾಮಾನ್ಯ IP ಸೆಟ್‌ಗಳಿಗೆ ವಿದ್ಯುತ್ ಮೂಲಸೌಕರ್ಯ ಕಲ್ಪಿಸಿರುವುದಕ್ಕೆ ಘಟನೋತ್ತರ ಅನುಮೋದನೆ ನೀಡಿದೆ.

(3) ವಿದ್ಯುತ್ ಸರಬರಾಜು ಕಂಪನಿಗಳು ಸಕ್ರಮಗೊಳಿಸಿದ ಕೃಷಿ ಪಂಪ್‌ಸೆಟ್‌ಗಳಿಗೆ 2022-23 ಮತ್ತು 2023-24 ರಲ್ಲಿ ಟೆಂಡರ್ ಮೂಲಕ ಮೂಲಸೌಕರ್ಯಗಳನ್ನು ಕಲ್ಪಿಸುವ ಸಲುವಾಗಿ ಟೆಂಡರ್ ಕರೆಯಲಾದ ಅಂದಾಜುಪಟ್ಟಿಯನ್ನು ಪುನರ್ ಪರಿಶೀಲಿಸಿ, ಪಂಪ್ ಸೆಟ್‌ಗಳು ಹಾಲಿ ಇರುವ ವಿದ್ಯುತ್‌ಜಾಲದಿಂದ 500 ಮೀಟರ್‌ಯಿಂದಾಚೆಯಿದ್ದಲ್ಲಿ ಕ್ರಮಸಂಖ್ಯೆ (5) ರಂತೆ ಕಾಮಗಾರಿಗಳನ್ನು ಕೈಗೊಳ್ಳುವುದು ಮತ್ತು 500 ಮೀಟರ್ ಒಳಗಿರುವ ಪಂಪ್‌ಸೆಟ್‌ಗಳಿಗೆ ಕನಿಷ್ಠ ಅವಶ್ಯಕತೆಗೆ ತಕ್ಕಂತೆ ಅನುಷ್ಠಾನಗೊಳಿಸಲು ಕ್ರಮವಹಿಸುವುದು.

(4) ದಿನಾಂಕ 22.9.2023 ರೊಳಗೆ ನೋಂದಾಯಿಸಲ್ಪಟ್ಟ IP set ಸಂಖ್ಯೆಗಳನ್ನು ಕೂಡಲೇ ಧೃಡಪಡಿಸಿಕೊಂಡು ಟೆಂಡರ್ ಕರೆಯಬೇಕಾದ ಕಾಮಗಾರಿಗಳನ್ನು ನಿಯಮನುಸಾರ ಕ್ರಮವಹಿಸಲು ಅನುಮೋದಿಸಿದೆ.

(5) ಈಗಾಗಲೇ ನೋಂದಣಿಗೊಂಡು ಮೂಲಸೌಕರ್ಯ ರಚನೆಗೆ ಕಾಯುತ್ತಿರುವ ಅಥವಾ ಹೊಸದಾಗಿ ನೋಂದಣಿಗೊಳ್ಳುವ ಪಂಪ್ ಸೆಟ್ ಗಳು, ವಿದ್ಯುತ್ ಜಾಲದಿಂದ 500ಮೀಟರ್‌ಯಿಂದಾಚೆ ಇದ್ದಲ್ಲಿ, stand-alone/off-grid

solar pump ಪಂಪ್ ಸೆಟ್ ಅಳವಡಿಸಲು ಸೂಚಿಸಿದೆ. ಸೌರ ಪಂಪ್‌ಸೆಟ್‌ಗಳನ್ನು ಉತ್ತೇಜಿಸಲು ಕೇಂದ್ರ ಸರ್ಕಾರದಿಂದ ಶೇ.30 ರಷ್ಟು ಸಹಾಯಧನ ಅಲ್ಲದೆ ರಾಜ್ಯ ಸರ್ಕಾರದಿಂದ ಶೇಕಡ 30 ರಷ್ಟು ಇರುವ ಸಹಾಯಧನವನ್ನು ಶೇಕಡ 50ಕ್ಕೆ ಹೆಚ್ಚಿಸಿ ಸರ್ಕಾರ ಅನುಮೋದಿಸಿದೆ. ರೈತರು ಈಗಾಗಲೇ ವಿದ್ಯುತ್ ಸಂಪರ್ಕಕ್ಕಾಗಿ ಮೊತ್ತವನ್ನು ಪಾವತಿಸಿದ್ದರೆ, ಪಾವತಿಸಿದ ಮೊತ್ತವನ್ನು ರೈತರ ವಂತಿಗೆ ಎಂದು ಪರಿಗಣಿಸಿ, ಸೌರ ಪಂಪ್‌ಸೆಟ್‌ಗಳನ್ನು ಅಳವಡಿಸುವುದು.

(6) Stand – alone / off-grid solar ಪಂಪ್ ಸೆಟ್ ಸೌಲಭ್ಯವನ್ನು ಸ್ಥಳೀಯ ಅವಶ್ಯಕತೆಯಂತೆ ಗುರುತು ಮಾಡಿ 10 HP ಸಾಮರ್ಥ್ಯಕ್ಕೆ ಮಿತಿಗೊಳಿಸುವುದು, ಆದಾಗ್ಯೂ MNRE ಷರತ್ತುಗಳ ಪ್ರಕಾರ 7.5 HP ಸಾಮರ್ಥ್ಯಕ್ಕೆ ಅನುಗುಣವಾಗಿ ಸಬ್ಸಿಡಿ/ ಅನುದಾನವು ಸೀಮಿತವಾಗಿರುತ್ತದೆ.

(7) ರೈತರು Stand – alone / off-grid solar ಪಂಪ್‌ಸೆಟ್ ಅಳವಡಿಸಿಕೊಂಡ ನಂತರ, ಅಂತಹ ಪಂಪ್ ಸೆಟ್‌ಗಳನ್ನು GRID POWER ಜಾಲದ ಸಂಪರ್ಕದಿಂದ ಕಡಿತಗೊಳಿಸಲು ಎಲ್ಲಾ ESCOM ಗಳು ಕ್ರಮವಹಿಸುವುದು.

(8) ಇಲಾಖೆಯಿಂದ ಇಲಾಖೆಗೆ ಶುಲ್ಕರಹಿತ ವರ್ಗಾವಣೆ ಆಧಾರದ ಮೇಲೆ ಸರ್ಕಾರಿ ಜಮೀನನ್ನು ಕಂದಾಯ ಇಲಾಖೆಯಿಂದ ಇಂಧನ ಇಲಾಖೆಗೆ ಪಡೆಯುವ ಮೂಲಕ ಸಬ್‌ಸ್ಟೇಷನ್‌ನ ಬಳಿ RESCO ಮಾದರಿಯಡಿಯಲ್ಲಿ KUSUM-C ಪ್ರಕಾರ ಫೀಡರ್ ಸೌರೀಕರಣ ಅನುಷ್ಠಾನಗೊಳಿಸುವುದು.

(9) KERC ನೀಡಿರುವ ಕಾಲಮಿತಿಯೊಳಗೆ ಎಲ್ಲಾ IP ಸೆಟ್‌ಗಳನ್ನು ಎಣಿಕೆ ಮಾಡಿ ಅವುಗಳನ್ನು ಆಯಾ ರೈತರ ಆಧಾರ್ ಸಂಖ್ಯೆಗೆ ಲಿಂಕ್ ಮಾಡಲು ESCOM ಗಳು ಅಗತ್ಯ ಕ್ರಮ ತೆಗೆದುಕೊಂಡು ಪೂರ್ಣಗೊಳಿಸುವುದು.

(10) ದಿನಾಂಕ 22.9.2023ರ ನಂತರ ನೋಂದಾಯಿಸಲ್ಪಡುವ IP ಸೆಟ್‌ಗಳಿಗೆ ಮೂಲಸೌಕರ್ಯವನ್ನು ರೈತರು ಸ್ವಯಂ-ಕಾರ್ಯನಿರ್ವಹಣೆಯಡಿ (self-execution) ರಚಿಸಿಕೊಳ್ಳತಕ್ಕದ್ದು.

ನೀರಾವರಿ ಪಂಪ್‌ಸೆಟ್‌ಗಳ ಬಗ್ಗೆ ಈ ಹಿಂದೆ ಹೊರಡಿಸಲಾಗಿದ್ದ ಎಲ್ಲಾ ಸರ್ಕಾರಿ ಆದೇಶ / ಸುತ್ತೋಲೆಗಳನ್ನು ಹಿಂಪಡೆಯಲಾಗಿದೆ.

ಸದರಿ ಆದೇಶವನ್ನು ಸಚಿವ ಸಂಪುಟ ವಿಷಯ ಸಂಖ್ಯೆ: ಸಿ 475/2023 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿನೋದ್ ಕುಮಾರ್ ಡಿ ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ

ಇವರಿಗೆ:- ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಕರ್ನಾಟಕ ರಾಜ್ಯಪತ್ರ ಪ್ರಕಟಣೆಗಾಗಿ.

**ಪ್ರತಿ:**

(1) ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
(2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ವಿಧಾನ ಸೌಧ, ಬೆಂಗಳೂರು
(3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ಬೆಂಗಳೂರು.

(4) ವ್ಯವಸ್ಥಾಪಕ ನಿರ್ದೇಶಕರು ಕೆಪಿಸಿಎಲ್/ ಕೆಪಿಟಿಸಿಎಲ್/ ಪಿಸಿಕೆಎಲ್/ಬೆಸ್ಕಾಂ/ಸೆಸ್ಕ/ಮೆಸ್ಕಾಂ/ ಹೆಸ್ಕಾಂ/ ಜೆಸ್ಕಾಂ/ ಕ್ರೆಡಲ್/ಹುಗ್ರಾವಿಸಸಂ.
(5) ನಿರ್ದೇಶಕರು (ಪ್ರಸರಣ) ಕೆಪಿಟಿಸಿಎಲ್, ಕಾವೇರಿ ಭವನ, ಬೆಂಗಳೂರು
(6) ನಿರ್ದೇಶಕರು (ತಾಂತ್ರಿಕ) ಬೆಸ್ಕಾಂ/ಸೆಸ್ಕ/ಮೆಸ್ಕಾಂ/ಹೆಸ್ಕಾಂ/ಜೆಸ್ಕಾಂ
(7) ಕಾರ್ಯದರ್ಶಿಗಳು, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ, ಸಂಖ್ಯೆ:16, ಸಿ-1, ಮಿಲ್ಲರ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ, ಬೆಂಗಳೂರು 560 052.
(8) ಸರ್ಕಾರದ ಅಪರ ಕಾರ್ಯದರ್ಶಿಗಳು/ನಿರ್ದೇಶಕರು (ತಾಂತ್ರಿಕ)/ (ಆರ್ಥಿಕ), ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
(10) ಮುಖ್ಯ ಇಂಜಿನಿಯರ್ (ವಿ) State Load Despatch Centre, ಆನಂದರಾವ್ ವೃತ್ತ, ಬೆಂಗಳೂರು.
(11) ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿಗಳು, ಇಂಧನ ಇಲಾಖೆ, ವಿಧಾನ ಸೌಧ, ಬೆಂಗಳೂರು.
(12) ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
(13) ಶಾಖಾ ಕಛೇರಿ ಪ್ರತಿಗಳು.

ಮೆಮೋ: ಚಾವಿಸನಿನಿ/ಪ್ರ.ವ್ಯ(ತಾ)/ಉಪ್ರವ್ಯ(ತಾ–3)/100/2023–24/ cys-963 ದಿನಾಂಕ: 1 OCT 2023
ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ:

1. ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾ.ವಿ.ಸ.ನಿ.ನಿ, ಮೈಸೂರು/ಹಾಸನ.
2. ಪ್ರಧಾನ ವ್ಯವಸ್ಥಾಪಕರು ತಾಂತ್ರಿಕ/ವಾಣಿಜ್ಯ/ಖರೀದಿ/ಯೋಜನೆ, ನಿಗಮ ಕಛೇರಿ, ಚಾವಿಸನಿನಿ, ಮೈಸೂರು.
3. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ), ರವರು ಕಾ ಮತ್ತು ಪಾ ವೃತ್ತ, ಚಾವಿಸನಿನಿ.
4. ಉಪ ಪ್ರಧಾನ ವ್ಯವಸ್ಥಾಪಕರು, ಎಂ.ಐ.ಎಸ್., ನಿಗಮ ಕಛೇರಿ, ಚಾವಿಸನಿನಿ, ಮೈಸೂರು ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
5. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ), ರವರು ಕಾ ಮತ್ತು ಪಾ ವಿಭಾಗ, ಚಾವಿಸನಿನಿ,
6. ಎಲ್ಲಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ), ರವರು ಕಾ ಮತ್ತು ಪಾ ಉಪ-ವಿಭಾಗ, ಚಾವಿಸನಿನಿ,
7. ಆಪ್ತ ಸಹಾಯಕರು ವ್ಯವಸ್ಥಾಪಕ ನಿರ್ದೇಶಕರು/ ತಾಂತ್ರಿಕ ಸಹಾಯಕರು ನಿರ್ದೇಶಕರು(ತಾಂತ್ರಿಕ) ಇವರ ಗಮನಕ್ಕೆ ಹಾಗೂ ವಿಷಯವನ್ನು ವ್ಯ.ನಿ/ ನಿ.(.ತಾ) ರವರ ಗಮನಕ್ಕೆ ತರಲು ಸಲ್ಲಿಸಿದೆ.

ಮುಖ್ಯ ಕಡತ/ಕ.ಪ್ರ.

ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ),
ಚಾ.ವಿ.ಸ.ನಿ.ನಿ., ಮೈಸೂರು